ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ರಾಯಚೂರು ಜಿಲ್ಲೆಗೆ ಆರ್.ಡಿ.ಪಿ.ಆರ್ ಇಲಾಖೆಯಿಂದ ಮಂಜೂರಾತಿಯಾಗಿರುವ ಅನುದಾನದ ಬಗ್ಗೆ

ಶ್ರೀ ಎನ್. ಎಸ್. ಬೋಸ್‌ರಾಜು(ವಿಧಾನಸಭೆಯಿಂದ ಚುನಾಯಿತರಾದವರು):-

274 (389) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆದೇಶ ಸಂಖ್ಯೆ:ಗ್ರಾಅಪ: 111:ಆರ್.ಆರ್.ಸಿ:2019, ದಿನಾಂಕ: 06-11-2019ರ ಪ್ರಕಾರ ಕೆಲವೊಂದು ವಿಧಾನಸಭಾ ಕ್ಷೇತ್ರಗಳು ಹಾಗೂ ಪ್ರದೇಶಗಳು ಪ್ರವಾಹದಿಂದ ಹಾನಿಗೊಳಗಾಗದೆ ಇದ್ದರೂ ಅನುದಾನ ಮಂಜೂರು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು ;

(ಆ) ಸದರಿ ಆದೇಶದಲ್ಲಿ ವೈಯಕ್ತಿಕ ಹೆಸರುಗಳ ಮೇಲೆ ನೆರೆಪರಿಹಾರದ ಅನುದಾನ ಮಂಜೂರು ಮಾಡಲಾಗಿದೆಯೇ ; ಇದರ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಜೀವಗಾಂಧಿ ಟೆಕ್ನಾಲಜಿ ಮಿಷನ್ ಅಡಿಯಲ್ಲಿ ಪ್ರಾರಂಭವಾಗಿರುವ ಮಾನ್ವಿ ತಾಲ್ಲೂಕಿನ ಕುರ್ಡಿಕಲ್ಲುರು ಯೋಜನೆಗಳನ್ನು ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ರಾಯಚೂರು ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ಇರುವ ಕುಡಿಯುವ ನೀರಿನ ಸಮಸ್ಯೆಯನ್ನು ನಿವಾರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?